**ಕೃಷಿ ವಿಶ್ವ ವಿದ್ಯಾನಿಲಯ**
**ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)**
**ಜಿ.ಕೆ.ವಿ.ಕೆ., ಬೆಂಗಳೂರು–560065**
*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

**ದಿನಾಂಕ:** 02.09.2022

## ಬೆಂಗಳೂರು ನಗರ ಜಿಲ್ಲೆಗೆ ಸೀಮಿತವಾಗಿದೆ.

### ಕಳೆದ ಐದು ದಿನಗಳ ಹವಾಮಾನ ಸಾರಂಶ

| ನಿಯತಾಂಕಗಳು | 29.8.2022 | 30.8.2022 | 31.8.2022 | 01.9.2022 | 02.9.2022 |
|---|---|---|---|---|---|
| ಮಳೆ (ಮಿ ಮೀ) | 0 | 56.4 | 5.0 | 8.2 | 16.0 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 27.0 | 27.6 | 20.2 | 27.8 | 27.2 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 17.2 | 18.0 | 18.2 | 19.8 | 18.0 |
| ಮೋಡ ( ಪ್ರಮಾಣ) | 8 | 6 | 6 | 3 | 6 |
| ಆರ್ದ್ರತೆ 7.20 ಬೆ (ಶೇ) | 91 | 89 | 95 | 93 | 93 |
| ಆರ್ದ್ರತೆ 2.20 ಮ (ಶೇ) | 56 | 63 | 60 | 63 | … |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 3.7 | 2.2 | 3.5 | 2.5 | 2.4 |
| ಗಾಳಿಯ ದಿಕ್ಕು ( ಡಿಗ್ರಿ) | 320 | 45 | 45 | 320 | 90 |

### ಈ ವಾರದ ಹವಾಮಾನ ಮುನ್ಸೂಚನೆ (ಭಾರತೀಯ ಹವಾಮಾನ ಇಲಾಖೆ)
(ದಿನಾಂಕ 03–09–2022 ರಿಂದ 07–09–2022 ವರೆಗೆ)

| ನಿಯತಾಂಕಗಳು | 03.9.2022 | 04.9.2022 | 05.9.2022 | 06.9.2022 | 07.9.2022 |
|---|---|---|---|---|---|
| ಮಳೆ (ಮಿ ಮೀ) | 16 | 11 | 12 | 17 | 18 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 28 | 29 | 29 | 28 | 28 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 20 | 20 | 20 | 20 |
| ಮೋಡ ( ಪ್ರಮಾಣ) | 8 | 8 | 8 | 8 | 8 |
| ಆರ್ದ್ರತೆ 7.20 ಬೆ (ಶೇ) | 93 | 93 | 95 | 95 | 95 |
| ಆರ್ದ್ರತೆ 2.20 ಮ (ಶೇ) | 91 | 91 | 93 | 93 | 93 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 3 | 4 | 5 | 4 | 4 |
| ಗಾಳಿಯ ದಿಕ್ಕು ( ಡಿಗ್ರಿ) | 243 | 238 | 248 | 248 | 248 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರದಿಂದ ಸಾದಾರಣ ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **28.0-29.0$^{o}$C** ಮತ್ತು ಕನಿಷ್ಠ **20.0$^{o}$C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **93-95** % ಇದ್ದು ಮಧ್ಯಾಹ್ನ **91-93** % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **3-5** ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

**"ಹುಬ್ಬೇ ಮಳೆ, ಉಬ್ಬುಬ್ಬಿ ಸುರೀತದೆ !"**

- ಹುಬ್ಬ ನಕ್ಷತ್ರದ ಮಳೆಯ ಕಾಲವು ಆಗಸ್ಟ್ ತಿಂಗಳ 31 ರಿಂದ ಸೆಪ್ಟೆಂಬರ್ 12 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 80.4 ಮಿ.ಮೀ. ವರೆಗೆ ಮಳೆಯಾಗುತ್ತದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಸಾಮಾನ್ಯ ಸಲಹೆಗಳು | | 1. ಸಾದಾರಣದಿಂದ ಹೆಚ್ಚು ಮಳೆಯ ಅವಕಾಶ ಇರುವುದರಿಂದ ಮುಂಗಾರು ಬಿತ್ತನೆಯನ್ನು ಭೂಮಿಯ ತೇವಾಂಶದ ಆಧಾರದಲ್ಲಿ ಮುಂದುವರಿಸಿ.<br>2. ಹೆಚ್ಚು ಮಳೆಯ ಅವಕಾಶವಿರುವುದರಿಂದ ಬೆಳೆಗಳಲ್ಲಿ ಬಸಿಗಾಲುವೆ ನಿರ್ಮಿಸಿ ಹೆಚ್ಚಿನ |

| | | |
|---|---|---|
| | | ಮಳೆನೀರನ್ನು ಹೊರಹಾಕಿ ಆಯಾ ವಲಯ ಪ್ರದೇಶಕ್ಕೆ ಶಿಫಾರಸ್ಸು ಮಾಡಿದ ತಳಿಗಳನ್ನೇ ಬಿತ್ತನೆಗೆ ಬಳಸುವುದು ಸೂಕ್ತ.<br>3. ಹೆಚ್ಚು ಮಳೆಯ ಅವಕಾಶವಿರುವುದರಿಂದ ಬೆಳೆಗಳಲ್ಲಿ ಕಳೆಗಳ ಸಮಸ್ಯೆ ಹೆಚ್ಚಾಗಿರುತ್ತದೆ ಇದರ ನಿರ್ಮೂಲನೆಗೆ ಕುಂಟೆ ಹಾಯಿಸುವ ಮುಖಾಂತರ ಅಥವಾ ಕಳೆನಾಶಕವನ್ನು ಸಿಂಪಡಿಸಬೇಕು.<br>4. ಮುಂದಿನ 5 ದಿನಗಳಲ್ಲಿ ಉತ್ತಮ ಮಳೆಯ ಅವಕಾಶವಿರುವುದರಿಂದ ರಾಗಿ ಬಿತ್ತನೆಯಾಗಿರುವ ಕಡೆಗಳಲ್ಲಿ ಎಲ್ಲೆಲ್ಲಿ ಖಾಲಿ ಇರುವ ಜಾಗಗಳಲ್ಲಿ ರಾಗಿ ಗಿಡಗಳನ್ನು ನಾಟಿ ಮಾಡಿ ಇದರಿಂದ ಗಿಡಗಳ ಸಂಖ್ಯೆಯನ್ನು ಕಾಪಾಡಿಕೊಳ್ಳಬಹುದು ಹಾಗು ತೆಂಡೆ ಹೊಡೆಯಲು ಸಹಾಯವಾಗುತ್ತದೆ ಮತ್ತು ಉತ್ತಮ ಇಳುವರಿಯನ್ನು ಪಡೆಯಬಹುದು.<br>5. ಈಗಾಗಲೇ ಬಿತ್ತನೆಯಾಗಿರುವ ತೊಗರಿ ಮತ್ತು ಜೋಳದ ಬೆಳೆಗಳಲ್ಲಿ ಬಸಿಗಾಲುವೆ ನಿರ್ಮಿಸಿ ಹೆಚ್ಚಿನ ಮಳೆನೀರನ್ನು ಹೊರಹಾಕಿ ಮೇಲು ಗೊಬ್ಬರವನ್ನು ಕೊಡುವುದನ್ನು ಮಳೆ ನಿಲ್ಲುವ ತನಕ ಮುಂದೂಡಿ. |
| ಮುಂಗಾರು ಬೆಳೆಗಳು | ಬೆಳವಣಿಗೆ ಹಂತ | **ಎರಡುಬೆಳೆ ಪದ್ಧತಿಯಲ್ಲಿ ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ಮೇ ತಿಂಗಳಲ್ಲಿ ಬಿತ್ತಿದ ಪೂರ್ವ ಮುಂಗಾರು ಬೆಳಗಳನ್ನು ಕಟಾವು ಮಾಡಿ ತಕ್ಷಣ ತಡವಾದ ಮುಂಗಾರು ಬೆಳೆಗಳಾದ ರಾಗಿ: ಕೆ.ಎಮ್,ಆರ್–301, ಇಂಡಾಫ್ 5,7 ಮತ್ತು 9, ಹಾಗು ಎಂ.ಎಲ್–365 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು<br>ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ–ಎಚ್.ಎ–3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್–1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1, ಹುಚ್ಚೆಳ್ಳು ತಳಿಗಳನ್ನು ಆಗಸ್ಟ್ ತಿಂಗಳ ಒಳಗಾಗಿ ಬಿತ್ತನೆ/ನಾಟಿ ಮಾಡುವುದು.<br>ಮುಸುಕಿನ ಜೋಳ: ಗಂಗಾ–11, ಡೆಕ್ಕನ್–103, ವಿಜಯ ಕಾಂಪೋಸಿಟ್, ಕಾಂಪೋಸಿಟ್ ಎನ್.ಎ.ಸಿ–6004,6002,<br>ನಿತ್ಯಶ್ರೀ–ಸಂಕರಣ ತಳಿ ಮತ್ತು ಹೇಮ –ಸಂಕರಣ ತಳಿ ಬಿತ್ತಲು ಸೂಚಿಸಲಾಗಿದೆ.<br>ಮೇಲಿನ ಮುಸುಕಿನ ಜೋಳ ತಳಿಗಳು ಕೇದಿಗೆ ರೋಗ, ಎಲೆ ಅಂಗಮಾರಿ ರೋಗ ಮತ್ತು ಕಾಂಡ ಕೊರೆಯುವ ಕೀಟ ನಿರೋಧಕ ಶಕ್ತಿ ಹೊಂದಿವೆ. |
| ಮಾವು | | 1. ಹೆಚ್ಚು ಮಳೆಯ ಅವಕಾಶವಿರುವುದರಿಂದ ಮಾವಿನ ತೋಪುಗಳಲ್ಲಿ ಬಸಿಗಾಲುವೆ ನಿರ್ಮಿಸಿ ಹೆಚ್ಚಿನ ಮಳೆನೀರನ್ನು ಹೊರಹಾಕಿ ಮತ್ತು ಒಣ ರೆಂಬೆ ಕೊಂಬೆಗಳನ್ನು ಕತ್ತರಿಸಿ ಹೊರಹಾಕಿ.<br>2. ಕಳೆ ನಿರ್ವಹಣೆಗೆ ಮತ್ತು ಭೂಮಿಯಲ್ಲಿನ ತೇವಾಂಶವನ್ನು ಸಂರಕ್ಷಿಸಲು ಅಂತರ ಬೇಸಾಯ ಮಾಡಬೇಕು. |
| **ರೇಷ್ಮೆ ಸಾಕಾಣಿಕೆ** | | 1. ರೇಷ್ಮೆ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು. |
| | **ಹೈನುಗಾರಿಕೆ** | |
| | | |
| **ಪಶುಸಂಗೋಪನೆ** | | ➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಹೈನುಗಾರಿಕೆಯಲ್ಲಿ ರೋಗಗಳ ನಿಯಂತ್ರಣಕ್ಕೆ ಪ್ರತಿ ವರ್ಷ ಲಸಿಕೆಯನ್ನು ಮಾಡಿಸುವುದು ಉತ್ತಮ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |


**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**


**ಮೊಬೈಲ್ ಆಪ್:**

- ➢ ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ➢ ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.